**Akashvani : Bangalore**
**Regional Bulletin In Kannada**
**11.07.2025 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.07.2025 / 18.40 hrs**

**<><*<><>*><>**

## ಮುಖ್ಯಾಂಶಗಳು

೧. **ಕ೫೦೦ ಪಡಿತರ ಚೀಟಿಗಳಿಗೆ ಒಂದು ಪಡಿತರ ಅಂಗಡಿ ತೆರೆಯಲು ಸರ್ಕಾರ ನಿರ್ಧಾರ**

೨. **ಆಹಾರ ತ್ಯಾಜ್ಯ ತಗ್ಗಿಸಲು ಕೇಂದ್ರ ಸರ್ಕಾರದಿಂದ ತಂತ್ರಜ್ಞಾನದ ಬಳಕೆಗೆ ಆದ್ಯತೆ**

೩. **ಕೊಡಗು ಜಿಲ್ಲೆಯ ೧ ಸಾವಿರದ ೬೦೦ ಆದಿವಾಸಿಗಳಿಗೆ ಜಮೀನು ಹಕ್ಕುಪತ್ರ ವಿತರಣೆಗೆ ಕ್ರಮ**

೪. **ವಿಶ್ವ ಜನಸಂಖ್ಯಾ ದಿನಾಚರಣೆಯ ಪ್ರಯುಕ್ತ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಾಗೃತಿ ಜಾಥಾ**

೫. **ಬೆಂಗಳೂರು ನಗರದಾದ್ಯಂತ ಇ-ಖಾತಾ ಮೇಳ ಆಯೋಜನೆಗೆ ನಿರ್ಧಾರ**

**<><*<><>*><>**

ಗ್ರಾಮೀಣ ಪ್ರದೇಶದಲ್ಲಿ ೫೦೦ ಪಡಿತರ ಚೀಟಿಗಳಿಗೆ ಒಂದು ಪಡಿತರ ಅಂಗಡಿ ಹಾಗೂ ನಗರ ಪ್ರದೇಶಗಳಲ್ಲಿ ೮೦೦ ಪಡಿತರ ಚೀಟಿಗಳಿಗೆ ಒಂದು ಪಡಿತರ ಅಂಗಡಿ ತೆರೆಯಲು ಶೀಘ್ರದಲ್ಲೇ ಆದೇಶ ಹೊರಡಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು  ಮಾತನಾಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಮುಂದಿನ ಮೂರು ತಿಂಗಳಲ್ಲಿ ೧೦ ಸಾವಿರ ನಿವೇಶನ ನೀಡುವ ಗುರಿ ಹೊಂದಲಾಗಿದೆ. ಈಗಾಗಲೇ ೨ ಸಾವಿರದ ೫೦೦ ಮನೆಗಳು ಮಂಜೂರಾಗಿದ್ದು, ಮುಂದಿನ ದಿನಗಳಲ್ಲಿ ಇದನ್ನು ಕೂಡ ಅರ್ಹ ಫಲಾನುಭವಿಗಳಿಗೆ ಹಂಚಲಾಗುತ್ತದೆ ಎಂದು ಮಾಹಿತಿ ನೀಡಿದರು.

**<><*<><>*><>**

ಅರ್ಹ ಪಡಿತರರಿಗೆ ಆಹಾರ ಧಾನ್ಯಗಳನ್ನು ಸಮರ್ಪಕವಾಗಿ ವಿತರಣೆ ಮಾಡಲಾಗುವುದು. ನಕಲಿ ಪಡಿತರದಾರರನ್ನು ಗುರುತಿಸಿ, ಪಡಿತರ ಕಾರ್ಡುಗಳನ್ನು ರದ್ದುಪಡಿಸಲಾಗುತ್ತದೆ. ಜನರಿಗೆ ಉತ್ತಮ ಗುಣಮಟ್ಟದ ಆಹಾರ ವಿತರಣೆಗೆ ಕ್ರಮ ವಹಿಸಲಾಗುವುದು ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯ ಉಣಕಲ್‌ನಲ್ಲಿರುವ ಭಾರತೀಯ ಆಹಾರ ನಿಗಮದ ಆಹಾರ ಸಂಗ್ರಹಣಾ ಗೋದಾಮಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಭಾರತೀಯ ಆಹಾರ ನಿಗಮವು ಎನ್‌ಎಫ್‌ಎಸ್‌ಎ ಕಾಯ್ದೆಯ ಪ್ರಕಾರ ಫಲಾನುಭವಿಗಳಿಗೆ ಆಹಾರ ಧಾನ್ಯಗಳನ್ನು ಪೂರೈಸಲು ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದರು.  ಆಹಾರದ ತ್ಯಾಜ್ಯವನ್ನು ಕಡಿಮೆ ಮಾಡಲು ತಂತ್ರಜ್ಞಾನದ ಬಳಕೆಗೆ ಆದ್ಯತೆ ನೀಡಲಾಗಿದೆ. ಆಹಾರ ತ್ಯಾಜ್ಯದ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಲು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಆಹಾರ ಧಾನ್ಯ ಸಂಗ್ರಹಣಾ ಕೊಠಡಿಯಲ್ಲಿ ಯಾವ ರೀತಿಯಲ್ಲಿ ಆಹಾರವನ್ನು ಸಂಗ್ರಹಿಸಬೇಕು. ಯಾವ ಔಷಧಗಳ ಸಿಂಪಡಣೆ ಮಾಡಬೇಕು ಎನ್ನುವುದನ್ನು ಸೂಚನೆ ನೀಡಲಾಗಿರುತ್ತದೆ. ಆಹಾರ ಸಾಗಣೆ ಮಾಡುವ ವಾಹನಗಳಿಗೆ ಜಿಪಿಎಸ್ ಅಳವಡಿಸಲಾಗಿದ್ದು, ಆ ಮೂಲಕ ವಾಹನಗಳು ಯಾವ ಊರಿಗೆ ಹೋಗುತ್ತಿವೆ ಎಂಬುದನ್ನು ಸಹ ಗಮನಿಸಲಾಗುತ್ತದೆ ಎಂದು ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.

**ಧ್ವನಿ: ಪ್ರಹ್ಲಾದ್ ಜೋಶಿ**

<><*<><>*><>

ಕೊಡಗು ಜಿಲ್ಲೆಯ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ೩ ತಾಲೂಕಿನ ೧ ಸಾವಿರದ ೬೦೦ ಆದಿವಾಸಿಗಳಿಗೆ ಜಮೀನು ಹಕ್ಕುಪತ್ರ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಮತ್ತು ವೀರಾಜಪೇಟೆ ಕ್ಷೇತ್ರ ಶಾಸಕ ಎ.ಎಸ್.ಪೊನ್ನಣ್ಣ ತಿಳಿಸಿದ್ದಾರೆ. ಈ ಕುರಿತು ಮಡಿಕೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಮಡಿಕೇರಿ, ವಿರಾಜಪೇಟೆ, ಪೊನ್ನಂಪೇಟೆ ತಾಲೂಕು ವ್ಯಾಪ್ತಿಯಲ್ಲಿ ನಿವೇಶನ ರಹಿತ ಆದಿವಾಸಿಗಳನ್ನು ಸಮೀಕ್ಷೆ ಮೂಲಕ ಗುರುತಿಸಲಾಗಿದೆ. ಸುಮಾರು ೬೦ ಎಕರೆ ಸರ್ಕಾರಿ ಜಾಗದಲ್ಲಿ ನಿವೇಶನ ರಹಿತ ಆದಿವಾಸಿಗಳಿಗೆ ನಿವೇಶನದ ಹಕ್ಕು ಪತ್ರ ನೀಡಲು ನಿರ್ಧಾರ ಕೈಗೊಳ್ಳಲಾಗಿದೆ. ೩ ತಿಂಗಳಲ್ಲಿ ಮುಖ್ಯಮಂತ್ರಿಗಳಿಂದ ಹಕ್ಕು ಪತ್ರ ವಿತರಣೆ ಮಾಡಲಾಗುತ್ತದೆ ಎಂದು ಹೇಳಿದರು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಸಿ, ನಿವೇಶನ ಹಕ್ಕು ಪತ್ರ ವಿತರಣೆಗೆ ವಿಳಂಬರಹಿತ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದು ಶಾಸಕ ಪೊನ್ನಣ್ಣ ಮಾಹಿತಿ ನೀಡಿದರು.

<><*<><>*><>

ಕೊಡಗು ಜಿಲ್ಲೆಯಲ್ಲಿ ಪ್ರಾಣ ಭೀತಿ ಉಂಟು ಮಾಡಿರುವ ೪ ಹುಲಿಗಳನ್ನು ಸೆರೆಹಿಡಿಯಲು ಸರ್ಕಾರ ಅನುಮತಿ ನೀಡಿದೆ. ಆತಂಕ ಸೃಷ್ಟಿಸಿರುವ ಹುಲಿಗಳನ್ನು ಸೆರೆಹಿಡಿಯಲು ಅರಣ್ಯ ಇಲಾಖೆಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಮತ್ತು ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಮಾಹಿತಿ ನೀಡಿದ್ದಾರೆ. ಮಡಿಕೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ನಾಡಿನಲ್ಲಿ ಕೃಷಿ ಜಮೀನು ನಾಶ ಪಡಿಸುತ್ತಿರುವ ಆನೆಗಳನ್ನು ಕಾಡಿಗಟ್ಟಲು ಮಹತ್ವದ ಕ್ರಮಕ್ಕೆ ಅರಣ್ಯ ಇಲಾಖೆ ಮುಂದಾಗಿದೆ. ಇಂದಿನಿಂದಲೇ ಆನೆಗಳನ್ನು ತಿತಿಮತಿ, ಮಾಯಮುಡಿ ವ್ಯಾಪ್ತಿಯಲ್ಲಿ ಕಾಡಿಗಟ್ಟಲು ಕಾರ್ಯಾಚರಣೆಯನ್ನು 'ಆನೆ ಕಾರ್ಯ ಪಡೆ' ಕೈಗೊಂಡಿದೆ ಎಂದು ತಿಳಿಸಿದರು.

<><*<><>*><>

ವಿಶ್ವ ಜನಸಂಖ್ಯಾ ದಿನಾಚರಣೆಯ ಪ್ರಯುಕ್ತ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ರಾಯಚೂರು ನಗರದಲ್ಲಿ ಇಂದು ಜಾಗೃತಿ ಜಾಥಾಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ.ಸುರೇಂದ್ರ ಬಾಬು ಚಾಲನೆ ನೀಡಿದರು. 'ಮಹಿಳೆಯ ದೈಹಿಕ ಮತ್ತು ಮಾನಸಿಕ ಆರೋಗ್ಯ ಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು' ಎಂಬ ಘೋಷವಾಕ್ಯದೊಡನೆ ಜಾಗೃತಿ ಜಾಥಾ ನಡೆಯಿತು. ಜಾಥಾ ಉದ್ದೇಶಿಸಿ ಮಾತನಾಡಿದ ಡಾ.ಸುರೇಂದ್ರ ಬಾಬು, ಸುಖದಿಂದ ಸಂಸಾರ ನಡೆಸಲು ಎರಡು ಮಕ್ಕಳು ಸಾಕು. ಇದರಿಂದ ಗುಣಮಟ್ಟದ ಶಿಕ್ಷಣ, ಆರೋಗ್ಯ, ಪೌಷ್ಟಿಕ ಆಹಾರ ಕೊಡಲು ಸಾಧ್ಯವಾಗುತ್ತದೆ. ಜೊತೆಗೆ ದೇಶದ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದು ಹೇಳಿದರು. ಹೆಚ್ಚುತ್ತಿರುವ ಜನಸಂಖ್ಯೆಯಿಂದ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ, ಅರಿವು ಮೂಡಿಸಲು ವಿಶ್ವ ಜನಸಂಖ್ಯಾ ದಿನ ಆಚರಿಸಲಾಗುತ್ತಿದೆ. ದೇಶದ ಅಭಿವೃದ್ಧಿಗೆ ಜನ ಬೇಕು. ಆದರೆ, ಮಿತಿಮೀರಿದ ಜನಸಂಖ್ಯೆ ಅಭಿವೃದ್ಧಿಗೆ ಮಾರಕವಾಗುತ್ತದೆ. ಸಮಸ್ಯೆಗಳು ಹೆಚ್ಚುತ್ತವೆ. ಆದ್ದರಿಂದ ಚಿಕ್ಕ ಸಂಸಾರ ಇದ್ದಷ್ಟು ಉತ್ತಮ ಜೀವನ ನಡೆಸಬಹುದು ಎಂದು ಅವರು ಸಲಹೆ ನೀಡಿದರು.

<><*<><>*><>

ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ವಿಶ್ವ ಜನಸಂಖ್ಯಾ ದಿನಾಚರಣೆ ನಿಮಿತ್ತ ಗದಗ ನಗರದಲ್ಲಿ ಜಾಗೃತಿ ಜಾಥಾ ಜರುಗಿತು. ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲೂಕು ಆಡಳಿತ, ತಾಲೂಕು ಪಂಚಾಯತ್ ಹಾಗೂ ತಾಲೂಕು ಆರೋಗ್ಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಜನಸಂಖ್ಯಾ ದಿನ ಕಾರ್ಯಕ್ರಮವನ್ನು ಶಿಡ್ಲಘಟ್ಟ ತಹಸೀಲ್ದಾರ್ ಗಗನಸಿಂಧು ಉದ್ಘಾಟಿಸಿದರು.

<><*<><>*><>

ಬೆಂಗಳೂರು ನಗರದಾದ್ಯಂತ ಇ-ಖಾತಾ ಮೇಳ ಆಯೋಜನೆ ಮಾಡಿದ್ದು, ಅದರ ಸದುಪಯೋಗ ಪಡಿಸಿಕೊಳ್ಳಲು ನಾಗರಿಕರಲ್ಲಿ ಅರಿವು ಮೂಡಿಸಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಯಲಹಂಕ ವಲಯ ವ್ಯಾಪ್ತಿಯಲ್ಲಿ 'ಮುಖ್ಯ ಆಯುಕ್ತರ ನಡೆ ವಲಯದ ಕಡೆ' ಕಾರ್ಯಕ್ರಮದ ಭಾಗವಾಗಿ

ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಯಲಹಂಕ ವಿಧಾನಸಭಾ ಕ್ಷೇತ್ರದಲ್ಲಿ ೪ ಸ್ಥಳಗಳಲ್ಲಿ ಇ-ಖಾತಾ ಮೇಳಗಳನ್ನು ಆಯೋಜಿಸಿದ್ದು, ಅದರಿಂದ ನಾಗರೀಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

**<><*<><>*><>**

ರೋಜ್‌ಗಾರ್ ಮೇಳದ ಭಾಗವಾಗಿ, ನಾಳೆ ಭಾರತದಾದ್ಯಂತ ವಿವಿಧ ಸರ್ಕಾರಿ ಉದ್ಯೋಗಗಳಿಗೆ ೫೧ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ವರ್ಚುವಲ್ ಮೂಲಕ ನೇಮಕಾತಿ ಪತ್ರಗಳನ್ನು ವಿತರಿಸಲಾಗುವುದು. ಪ್ರಧಾನಿ ನರೇಂದ್ರ ಮೋದಿ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ರೋಜ್‌ಗಾರ್ ಮೇಳವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಬೆಂಗಳೂರಿನಲ್ಲಿ ನಡೆಯುವ ರೋಜ್‌ಗಾರ್ ಮೇಳದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

**<><*<><>*><>**

ಸಿಂಧನೂರು-ಹುಬ್ಬಳ್ಳಿ-ಬೆಂಗಳೂರು ರೈಲು ಸಂಚಾರಕ್ಕೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ನಾಳೆ ಚಾಲನೆ ನೀಡಲಿದ್ದಾರೆ. ನಾಳೆ ಬೆಳಗ್ಗೆ ಹೊಸಪೇಟೆಯಿಂದ ವಿಶೇಷ ರೈಲಿನಲ್ಲಿ ಸಿಂಧನೂರಿಗೆ ಆಗಮಿಸಲಿರುವ ಸಚಿವ ವಿ.ಸೋಮಣ್ಣ, ರೈಲು ಸೇವೆಗೆ ಹಸಿರು ನಿಶಾನೆ ತೋರಲಿದ್ದಾರೆ. ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

**<><*<><>*><>**

ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ವೃತ್ತಿಯನ್ನು ಈ ಹಿಂದೆ ನಿರ್ವಹಿಸುತ್ತಿದ್ದವರಿಗೆ ಸರ್ಕಾರದ ವಿವಿಧ ಸೌಲಭ್ಯಗಳು ಸೇರಿದಂತೆ ಪುನರ್ವಸತಿ ಯೋಜನೆಗಳನ್ನು ಕಲ್ಪಿಸಬೇಕು ಎಂದು ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ದೇಶಾದ್ಯಂತ ಈಗಾಗಲೇ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಪದ್ಧತಿಗೆ ನಿಷೇಧವಿದೆ. ನಗರ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅನ್ನು ನೇಮಿಸಿಕೊಂಡು ಕೆಲಸ ಕಾರ್ಯವನ್ನು ಮಾಡಿಸಿದ್ದಲ್ಲಿ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು ಎಂದರು. ನಗರ ಹಾಗೂ ಗ್ರಾಮೀಣ ಪ್ರದೇಶ ವ್ಯಾಪ್ತಿಗಳಲ್ಲಿ ಕಡ್ಡಾಯವಾಗಿ ಸಕ್ಕಿಂಗ್ ಹಾಗೂ ಜೆಟ್ಟಿಂಗ್ ಯಂತ್ರಗಳ ಬಳಕೆಯೊಂದಿಗೆ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳಬೇಕು. ಮಲ ತ್ಯಾಜ್ಯ ನಿರ್ವಹಣೆಯನ್ನು ವೈಜ್ಞಾನಿಕ ರೀತಿಯಲ್ಲಿ ಎಫ್.ಎಸ್.ಎಂ.ಎಸ್ ಘಟಕಗಳಲ್ಲಿ ವಿಲೇವಾರಿ ಮಾಡಬೇಕು ಎಂದು ಅವರು ನಿರ್ದೇಶಿಸಿದರು. ಜಿಲ್ಲೆಯಲ್ಲಿ ಕೈಗೊಂಡಿರುವ ಎಫ್.ಎಸ್.ಎಂ.ಎಸ್ ಘಟಕ ಯೋಜನೆಗಳ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಪೂರ್ಣಗೊಳಿಸಿ, ಅವುಗಳ ಬಳಕೆಯಾಗಲು ಸ್ಥಳೀಯ ಸಂಸ್ಥೆಗಳು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

**<><*<><>*><>**

ಕೃಷಿ ಜಮೀನಿನ ಮಾಲೀಕರು ಮರಣ ಹೊಂದಿದ ನಂತರ ಪೌತಿ ಮಾಲೀಕತ್ವವು ಮೃತರ ಉತ್ತರಾಧಿಕಾರಿಗಳ ಹೆಸರಿಗೆ ಬದಲಾವಣೆಯಾಗದಿದ್ದಲ್ಲಿ ಉಂಟಾಗುವ ಸಮಸ್ಯೆಗಳನ್ನು ಪರಿಹರಿಸಲು ಹಾವೇರಿ ಜಿಲ್ಲೆಯಲ್ಲಿ ಪೌತಿ ಖಾತೆ ಅಂದೋಲನ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಗ್ರಾಮೀಣ ಭಾಗದ ಜನರಿಗೆ ಸರ್ಕಾರದ ಹಲವು ಸೇವೆಗಳು ಅವರ ಮನೆ ಬಾಗಿಲಿಗೆ ತಲುಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ನೂತನ ಯೋಜನೆಗಳಲ್ಲಿ ಪೌತಿ ಖಾತೆ ಅಂದೋಲನವು ಒಂದಾಗಿದೆ. ಪಿತ್ರಾರ್ಜಿತ ಆಸ್ತಿ ಹಕ್ಕನ್ನು ರೈತರ ಹೆಸರಿಗೆ ಮಾಡಿಕೊಡುವುದು ಈ ಪೌತಿ ಖಾತೆ ಆಂದೋಲನದ ಮೂಲ ಉದ್ದೇಶವಾಗಿದೆ ಎಂದರು. ಹಾವೇರಿಜಿಲ್ಲೆಯಲ್ಲಿ ಈಗಾಗಲೇ ೧ ಲಕ್ಷ ೧೧ ಸಾವಿರ ೭೮೧ ಪೌತಿ ಖಾತೆಗಳ ಆಧಾರ್ ಸೀಡಿಂಗ್ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**